ದಿನಾಂಕಃ 26.12.2025 ರಂದು ಸಾಕ್ಷಿಯನ್ನು ಪುನಃ ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಪಾಟೀ ಸವಾಲು : 2ನೇ ಎದುರುದಾರರ ಪರ ವಕೀಲರಿಂದ :**

ಸದರಿ ಹಸು ಖರೀದಿಸಿದ ಬಗ್ಗೆ ನನ್ನ ಬಳಿ ದಾಖಲೆಗಳು ಇಲ್ಲ. ಸದರಿ ಹಸುವನ್ನು ನಾನು ರೂ.1,40,000/- ಖರೀದಿಸಿರುತ್ತೇನೆ, ಆ ಸಮಯದಲ್ಲಿ ಕೈ-ಸಾಲ ಮಾಡಿರುತ್ತೇನೆ. ಸದರಿ ಹಸುವಿನ ಹಾಲನ್ನು ಹೋಟೆಲ್ ಹಾಗೂ ಅಕ್ಕಪಕ್ಕದ ಮನೆಗಳಿಗೆ ಮಾರುತ್ತಿದ್ದೆ. ಹೆಚ್ಚು ಪರಿಹಾರ ಪಡೆಯುವ ಸಲುವಾಗಿ ಹಸು ಹೆಚ್ಚು ಹಾಲು ಕೊಡುತ್ತಿತ್ತು ಹಾಗೂ ಹೆಚ್ಚು ಆದಾಯ ಬರುತ್ತಿತ್ತು ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನಿಪಿ-5 ರಲ್ಲಿ ಸದರಿ ಹಸುವಿನ ಬೆಲೆ ರೂ.60,000/- ಎಂದು ಬರೆದಿರುತ್ತದೆ ಎಂದರೆ ಸಾಕ್ಷಿ ಅವರು ಬರೆದ ಬಗ್ಗೆ ನನಗೆ ಗೊತ್ತಿಲ್ಲ, ಆದರೆ ಆ ಸಮಯದಲ್ಲಿ ಹಸು ರೂ.1,80,000/- ದಷ್ಟು ಬೆಲೆ ಬಾಳುತ್ತಿತ್ತು ಎಂದರೆ ಸರಿಯಲ್ಲ. ಈ ಪ್ರಕರಣವನ್ನು ಕಾಲಮಿತಿ ಮೀರಿದ ನಂತರ ದಾಖಲಿಸಿದ ಕಾರಣ ಪರಿಹಾರ ಪಡೆಯಲು ಅರ್ಹರಲ್ಲ ಎಂದರೆ ಸರಿಯಲ್ಲ. ಸದರಿ ಅಪಘಾತವನ್ನು ಮಾಡಿದಂತಹ ಚಾಲಕ 18 ವರ್ಷಕ್ಕಿಂತ ಕಡಿಮೆ ವಯಸ್ಸಿನ ಹುಡುಗ ಎಂದರೆ ಸರಿ. ಸದರಿ ಚಾಲಕನಿಗೆ ಕಾನೂನು ಪ್ರಕಾರ ಚಾಲನಾ ಪರವಾನಗಿ ಇರುವುದಿಲ್ಲ ಎಂದರೆ ಸರಿ. ಬೈಕ್ ಚಾಲಕನಿಗೆ ಚಾಲನಾ ಪರವಾನಗಿ ಇಲ್ಲದ ಕಾರಣ 2ನೇ ಎದುರುದಾರರು ಪರಿಹಾರ ಕೊಡಲು ಭಾದ್ಯರಲ್ಲ ಎಂದರೆ ಸರಿಯಲ್ಲ.

**ಮರು ವಿಚಾರಣೆ : ಇಲ್ಲ.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಈ ದಿನ ಬೆರಳಚ್ಚು ಮಾಡಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ ಎಂದು ಓದಲಾಗಿದೆ.

**ಪ್ರಧಾನ ಹಿರಿಯ ಸಿಜೆ ಮತ್ತು**
**ಎಂ.ಎ.ಸಿ.ಟಿ., ಶ್ರೀರಂಗಪಟ್ಟಣ.**

**ಸಾಕ್ಷಿದಾರರ ಸಹಿ.**